ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ

ನಂ. 09, 2ನೇ ಮಹಡಿ, 1ನೇ ಮುಖ್ಯರಸ್ತೆ, (ಹೊರವರ್ತುಲ ರಸ್ತೆ),ಕೆಂಗೇರಿ ಉಪನಗರ,ಬೆಂಗಳೂರು-60.

ಸಂಖ್ಯೆ : ಸ.ಇಂ/ವಾ-33/ವಾರ್ಡ್‌ಸಭೆ/2022-23

ದಿನಾಂಕ : 03/09/2022

## ವಾರ್ಡ್-33(ಕೆಂಗೇರಿ)ರ ವಾರ್ಡ್ ಸಭೆಯ ನಡವಳಿ.

ದಿನಾಂಕ: 03/09/2022 ರಂದು ಕೆಂಗೇರಿ ಉಪ ವಿಭಾಗ ವಾರ್ಡ್-33ರ ವಾರ್ಡ್ ಕಛೇರಿಯಲ್ಲಿ ಶ್ರೀ ಹೆಚ್. ದೇವರಾಜ್, ಸಹಾಯಕ ಕಂದಾಯ ಅಧಿಕಾರಿ, ಕೆಂಗೇರಿ ಉಪವಲಯ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿ.

**ಹಾಜರಿದ್ದವರು:**

| ಕ್ರ ಸಂ | ಸದಸ್ಯರ ಹೆಸರು | ಪದನಾಮ/ಇಲಾಖೆ | ಹಾಜರಾತಿ |
|---|---|---|---|
| 1. | ಶ್ರೀ ಹೆಚ್.ದೇವರಾಜ್ | ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ ಸಹಾಯಕ ಕಂದಾಯ ಅಧಿಕಾರಿ, ಕೆಂಗೇರಿ ಉಪವಲಯ | ಹಾಜರಿದ್ದರು |
| 2. | ಶ್ರೀ ಎನ್.ನಟರಾಜ | ವಾರ್ಡ್ ಸಮಿತಿ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್ ನಂ.33, ಕೆಂಗೇರಿ | ಹಾಜರಿದ್ದರು |
| 3. | ಶ್ರೀ ಸುರೇಶ್.ಸಿ | ಸಹಾಯಕ ಪೊಲೀಸ್ ಇನ್ಸ್‌ಪೆಕ್ಟರ್ ಕೆಂಗೇರಿ ಪೊಲೀಸ್ ಠಾಣೆ | ಹಾಜರಿದ್ದರು |
| 4. | ಶ್ರೀ ಬಿ.ಸಿ. ರಾಮು | ಹಿರಿಯ ಆರೋಗ್ಯ ಪರಿವೀಕ್ಷಕರು ಬಿ.ಬಿ.ಎಂ.ಪಿ | ಹಾಜರಿದ್ದರು |
| 5. | ಶ್ರೀ ಆನಂದ್ ಪಡಿ | ಸಹಾಯಕ ಅಭಿಯಂತರರು, ಕೆ-4-1, ಬಿ.ಡಬ್ಲ್ಯೂ.ಎಸ್.ಎಸ್.ಬಿ | ಹಾಜರಿದ್ದರು |
| 6. | ಶ್ರೀ ರಾಹುಲ್ ರಾಥೋಡ್ | ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ | ಹಾಜರಿದ್ದರು |
| 7. | ಶ್ರೀ ಎಂ. ನವೀನ್‌ಕುಮಾರ್ | ಕಿರಿಯ ಆರೋಗ್ಯ ಪರಿವೀಕ್ಷಕರು ಬಿ.ಬಿ.ಎಂ.ಪಿ | ಹಾಜರಿದ್ದರು |
| 8. | ಶ್ರೀ ಚಂದ್ರಶೇಖರ್ | ಕಂದಾಯ ಪರಿವೀಕ್ಷಕರು ಕೆಂಗೇರಿ ಉಪವಲಯ ಬಿ.ಬಿ.ಎಂ.ಪಿ | ಹಾಜರಿದ್ದರು |



Scanned with CamScanner

| | | | |
|---|---|---|---|
| 9. | ಶ್ರೀ ರೇವಣ್ಣ | ಕಂದಾಯ ಪರಿವೀಕ್ಷಕರು<br>ಕೆಂಗೇರಿ ಉಪವಲಯ<br>ಬಿ.ಬಿ.ಎಂ.ಪಿ | ಹಾಜರಿದ್ದರು |
| 10. | ಶ್ರೀ ಗಿರೀಶ್.ಎಂ | ಹೆಚ್.ಐ.ಓ<br>ವೈಧ್ಯಾಧಿಕಾರಿಯವರ ಕಛೇರಿ<br>ಬಿಬಿಎಂಪಿ | ಹಾಜರಿದ್ದರು |
| 11. | ಶ್ರೀಮತಿ ಮಮತ ಎಂ | ಪಿ.ಹೆಚ್.ಸಿ.ಓ<br>ವೈಧ್ಯಾಧಿಕಾರಿಯವರ ಕಛೇರಿ<br>ಬಿಬಿಎಂಪಿ | ಹಾಜರಿದ್ದರು |
| 12. | ಶ್ರೀಮತಿ ಶೋಭ | ಪಿ.ಹೆಚ್.ಸಿ.ಓ<br>ವೈಧ್ಯಾಧಿಕಾರಿಯವರ ಕಛೇರಿ<br>ಬಿಬಿಎಂಪಿ | ಹಾಜರಿದ್ದರು |

1) **<u>ಕೋವಿಡ್–19 ಸಾಂಕ್ರಾಮಿಕ ರೋಗದ ಬಗ್ಗೆ</u>:–** ಕೋವಿಡ್–19ರ ಸಾಂಕ್ರಾಮಿಕ ರೋಗದ ಬಗ್ಗೆ ಹಾಗೂ ಸರ್ಕಾರ ಮತ್ತು ಬಿ.ಬಿ.ಎಂ.ಪಿ. ವತಿಯಿಂದ ನೀಡುತ್ತಿರುವ ಸೌಲಭ್ಯ/ಸೌವಲತ್ತುಗಳು, ಮತ್ತು ಕೋವಿಡ್–19 ಪರೀಕ್ಷೆಯ ಬಗ್ಗೆ ಸವಿಸ್ತಾರವಾಗಿ ಸಭೆಗೆ ವಿವರಿಸಿದರು. ಕೋವಿಡ್–19ರ ಲಸಿಕೆಯನ್ನು ಪಡೆಯಲು ಸಾರ್ವಜನಿಕರು ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯಾಧಿಕಾರಿಗಳನ್ನು ಸಂಪರ್ಕಿಸಿ ಸಹಕಾರ ಪಡೆದುಕೊಳ್ಳಲು ಸಭೆಯಲ್ಲಿ ತಿಳಿಸಿದರು. ಕೋವಿಡ್ ಸುರಕ್ಷತಾ ನಿಯಮಾವಳಿಯನ್ನು ತಪ್ಪದೇ ಪಾಲಿಸಲು ಮತ್ತು ಮಾಸ್ಕ್ ಹಾಗೂ ಸ್ಯಾನಿಟೈಸರ್ ಖಡ್ಡಾಯವಾಗಿ ಉಪಯೋಗಿಸಲು ಸಭೆಯಲ್ಲಿ ಹಾಜರಿದ್ದ ಎಲ್ಲಾ ಸ್ಥಳಿಯ ನಿವಾಸಿಗಳಿಗೆ ಹಾಗೂ ಬಡಾವಣೆಯ ಪ್ರತಿನಿಧಿಗಳಿಗೆ ತಿಳಿಸಲಾಯಿತು ಮತ್ತು ಕೋವಿಡ್ ಬೂಸ್ಟರ್ ಲಸಿಕೆಯನ್ನು ಪಡೆದುಕೊಳ್ಳಲು ಮತ್ತು ಇದರ ಸದುಪಯೋಗ ಪಡೆಯಲು ಭಾಗವಹಿಸಿದ್ದ ಎಲ್ಲರಿಗೂ ಕೋರಲಾಯಿತು.

2) ವಾರ್ಡ್ ನಂ.33ರ ವ್ಯಾಪ್ತಿಯಲ್ಲಿ ಬರುವ ಕೊಮ್ಮಘಟ್ಟ ಮುಖ್ಯರಸ್ತೆ, ರೈಲ್ವೇ ಸಮಾನಾಂತರ ರಸ್ತೆ ಹಾಗೂ 80 ಅಡಿ ರಸ್ತೆ (ಹೊಯ್ಸಳ ವೃತ್ತ) ರಸ್ತೆಗಳಲ್ಲಿ ರಸ್ತೆಗುಂಡಿಗಳು ಉಂಟಾಗಿರುವ ರಸ್ತೆ ಗುಂಡಿಗಳು ಮುಚ್ಚುವಂತೆ ನಾಗರೀಕರು ಸಭೆಯಲ್ಲಿ ತಿಳಿಸಿದರು.

ಈ ಬಗ್ಗೆ ಸಭೆಯಲ್ಲಿ ಹಾಜರಿದ್ದ ಸಹಾಯಕ ಕಾರ್ಯಪಾಲಕ ಅಭಿಯಂತರರು, ರಸ್ತೆ ಮೂಲಭೂತ ಸೌಕರ್ಯರವರು ಮಾತನಾಡಿ ಪ್ರಸ್ತುತ ಮಳೆಗಾಲವಾಗಿರುವುದರಿಂದ ಡಾಂಬರೀಕರಣ ಕಾಮಗಾರಿ ಕೈಗೊಳ್ಳಲು ಕಷ್ಟವಾಗಿದ್ದು, ಮಳೆಗಾಲ ಮುಗಿದ ನಂತರ ಸಂಪೂರ್ಣವಾಗಿ ಹಾಳಗಿರುವ ರಸ್ತೆಗಳನ್ನು ಮುಂದಿನ ಅನುದಾನದಲ್ಲಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು ಹಾಗೂ ರಸ್ತೆ ಗುಂಡಿಗಳನ್ನು ಮುಚ್ಚಲು ತುರ್ತಾಗಿ ಕ್ರಮ ವಹಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.



Scanned with CamScanner

3) ವಾರ್ಡ್‌ನ ನಾಗರೀಕರು ಸಭೆಯಲ್ಲಿ ಮಾತನಾಡಿ ವಾರ್ಡ್ ನಂ.33, ಕೆಂಗೇರಿ ವ್ಯಾಪ್ತಿಯಲ್ಲಿ ಬೀದಿ ದೀಪಗಳನ್ನು ಸರಿಯಾಗಿ ಅಳವಡಿಸದೇ ಇರುವುದರಿಂದ ರಾತ್ರಿ ವೇಳೆಯಲ್ಲಿ ಬೀದಿ ದೀಪಗಳು ಸರಿಯಾಗಿ ಕೆಲಸ ನಿರ್ವಹಿಸುತ್ತಿಲ್ಲವೆಂದು ತಿಳಿಸಿದರು.

ಈ ಬಗ್ಗೆ ನೋಡಲ್ ಅಧಿಕಾರಿಯವರು ಮಾತನಾಡಿ ಸಂಬಂಧಪಟ್ಟ ಅಧಿಕಾರಿಯವರೊಂದಿಗೆ ಚರ್ಚಿಸಿ ಸದರಿ ಸಮಸ್ಯೆಯನ್ನು ಬಗೆಹರಿಸಲು ಕ್ರಮವಹಿಸುವಂತೆ ತಿಳಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

4) ವಾರ್ಡ್ ನಂ.33, ಕೆಂಗೇರಿ ವ್ಯಾಪ್ತಿಯಲ್ಲಿ ಬರುವ ಕೆಂಗೇರಿ ಕೆರೆಗೆ ಸೆಕ್ಯೂರಿಟಿ ಗಾರ್ಡ್‌ಗಳನ್ನು ನಿಯೋಜಿಸುವಂತೆ, ಸದರಿ ಕೆರೆಯ ನಿರ್ವಹಣೆಯನ್ನು ಸರಿಯಾಗಿ ಮಾಡುತ್ತಿಲ್ಲವೆಂದು ಹಾಗೂ ತ್ಯಾಜ್ಯ ನೀರು ಕೆರೆಗೆ ಸೇರುತ್ತಿದೆ ಎಂದು ಎಂ.ಟಿ.ಎಸ್ ಬಡಾವಣೆ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಶ್ರೀ ಕದರಪ್ಪರವರು ಸಭೆಯಲ್ಲಿ ತಿಳಿಸಿದರು.

ಈ ಬಗ್ಗೆ ನೋಡಲ್ ಅಧಿಕಾರಿಯವರು ಮಾತನಾಡಿ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಿ ಅಗತ್ಯ ಕ್ರಮ ಕೈಗೊಳ್ಳಲು ತಿಳಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

5) ವಾರ್ಡ್ ನಂ.33ರ ವ್ಯಾಪ್ತಿಯಲ್ಲಿ ಬರುವ ಕೊಮ್ಮಘಟ್ಟಮುಖ್ಯರಸ್ತೆ ಹಾಗೂ ರೈಲ್ವೇ ಸಮಾನಾಂತರ ರಸ್ತೆಗಳ ಅಕ್ಕಪಕ್ಕದ ಪಾದಾಚಾರಿ ಮಾರ್ಗಗಳಲ್ಲಿ ವಾಹನಗಳನ್ನು ನಿಲ್ಲಿಸುತ್ತಿದ್ದು, ಪಾದಾಚಾರಿಗಳಿಗೆ ಓಡಾಡಲು ತೊಂದರೆಯಾಗುತ್ತಿದೆ ಎಂದು ಸ್ಥಳೀಯ ನಾಗರೀಕರು ಸಭೆಯಲ್ಲಿ ತಿಳಿಸಿದರು.

ಈ ಬಗ್ಗೆ ಪೊಲೀಸ್ ಇಲಾಖೆಯ ಅಧಿಕಾರಿಯವರು ಮಾತನಾಡಿ ಪಾದಾಚಾರಿ ಮಾರ್ಗಗಳಲ್ಲಿ ನಿಲ್ಲಿಸಲಾಗುತ್ತಿರುವ ವಾಹನಗಳನ್ನು ತೆರವುಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

6) ವಾರ್ಡ್ ನಂ.33ರ ವ್ಯಾಪ್ತಿಯಲ್ಲಿ ಬರುವ ಸರ್ವೆ ನಂ.16ರಲ್ಲಿ ಬರುವ ಸರ್ಕಾರಿ ಜಾಗವನ್ನು ಒತ್ತುವರಿ ಮಾಡಿಕೊಂಡಿರುವ ಬಗ್ಗೆ ಸಾರ್ವಜನಿಕರು ಸಭೆಯಲ್ಲಿ ತಿಳಿಸಿದರು.

ಈ ಬಗ್ಗೆ ನೋಡಲ್ ಅಧಿಕಾರಿಯವರು ಮಾತನಾಡಿ ಸರ್ವೆ ನಂ.16ರ ಸರ್ಕಾರಿ ಜಾಗವನ್ನು ಪರಿಶೀಲಿಸಿ ಒತ್ತುವರಿಯಾಗಿದ್ದಲ್ಲಿ ತೆರವುಗೊಳಿಸಲು ಸಂಬಂಧಪಟ್ಟ ಇಲಾಖೆಯವರೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

7) ನಾಗರೀಕರು ಸಭೆಯಲ್ಲಿ ಮಾತನಾಡಿ ವಾರ್ಡ್ ನಂ.33, ಕೆಂಗೇರಿ ವ್ಯಾಪ್ತಿಯಲ್ಲಿ ರಸ್ತೆಗಳಲ್ಲಿ ಉಂಟಾಗಿರುವ ರಸ್ತೆ ಗುಂಡಿಗಳನ್ನು ಮುಚ್ಚುಲು ಕ್ರಮ ಕೈಗೊಳ್ಳಲು ಸಭೆಯಲ್ಲಿ ಕೋರಿದರು.



Scanned with CamScanner

ಈ ಬಗ್ಗೆ ವಾರ್ಡ್‌ನ ಸಹಾಯಕ ಅಭಿಯಂತರರು ಮಾತನಾಡಿ ಈ ವಾರ್ಡ್ ನಂ.33(ಕೆಂಗೇರಿ) ವ್ಯಾಪ್ತಿಯಲ್ಲಿನ ಈಗಾಗಲೇ ಭಾಗಶಃ ರಸ್ತೆ ಗುಂಡಿಗಳನ್ನು ಮುಚ್ಚಲಾಗಿದ್ದು, ಪ್ರಸ್ತುತ ಮಳೆಗಾಲವಾಗಿರುವುದರಿಂದ ಉಳಿದ ರಸ್ತೆ ಗುಂಡಿಗಳನ್ನು ಮುಚ್ಚಲು ವಿಳಂಬವಾಗುತ್ತಿದ್ದು, ಮುಂಬರುವ ದಿನಗಳಲ್ಲಿ ರಸ್ತೆಗುಂಡಿಗಳನ್ನು ಮುಚ್ಚಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

(ಹೆಚ್.ದೇವರಾಜ್)
ಸಹಾಯಕ ಕಂದಾ[illegible]
ವಾರ್ಡ್-33, ಕೆಂಗೇರಿ

ರವರಿಗೆ,

1) ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ ರವರ ಕಛೇರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2) ಕಾರ್ಯಪಾಲಕ ಅಭಿಯಂತರರು, ಕೆಂಗೇರಿ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
3) ಸಹಾಯಕ ಕಂದಾಯ ಅಧಿಕಾರಿ ಅಧಿಕಾರಿಗಳು, ಕೆಂಗೇರಿ ವಲಯ ರವರ ಮಾಹಿತಿಗಾಗಿ, ಸದರಿ ಸಭೆಗೆ ಹಾಜರಾಗಲು/ ತಮ್ಮ ಪ್ರತಿನಿಧಿ ಸಿಬ್ಬಂದಿಯವರನ್ನು ನಿಯೋಜಿಸಲು ಕೋರಲಾಗಿದೆ.
4) ಸಹಾಯಕ ಕಾರ್ಯಪಾಲಕ ಅಭಿಯಂತರರು, (ಫ.ತ್ಯಾ.ನಿ) ರವರ ಮಾಹಿತಿಗಾಗಿ, ಸದರಿ ಸಭೆಗೆ ಹಾಜರಾಗಲು/ತಮ್ಮ ಪ್ರತಿನಿಧಿ ಸಿಬ್ಬಂದಿಯವರನ್ನು ನಿಯೋಜಿಸಲು ಕೋರಲಾಗಿದೆ.
5) ಪೊಲೀಸ್ ಇನ್ಸ್‌ಪೆಕ್ಟರ್, ಕೆಂಗೇರಿ ಪೊಲೀಸ್ ಠಾಣೆ (ಕಾನೂನು ಸುವ್ಯವಸ್ಥೆ) ರವರ ಮಾಹಿತಿಗಾಗಿ, ಸದರಿ ಸಭೆಗೆ ಹಾಜರಾಗಲು/ತಮ್ಮ ಪ್ರತಿನಿಧಿ ಸಿಬ್ಬಂದಿಯವರನ್ನು ನಿಯೋಜಿಸಲು ಕೋರಲಾಗಿದೆ.
6) ಪೊಲೀಸ್ ಇನ್ಸ್‌ಪೆಕ್ಟರ್, ಕೆಂಗೇರಿ ಪೊಲೀಸ್ ಠಾಣೆ (ಸಂಚಾರಿ) ರವರ ಮಾಹಿತಿಗಾಗಿ, ಸದರಿ ಸಭೆಗೆ ಹಾಜರಾಗಲು/ತಮ್ಮ ಪ್ರತಿನಿಧಿ ಸಿಬ್ಬಂದಿಯವರನ್ನು ನಿಯೋಜಿಸಲು ಕೋರಲಾಗಿದೆ.
7) ಆರೋಗ್ಯ ಅಧಿಕಾರಿ, ಕೆಂಗೇರಿ, ಕೆಂಗೇರಿ ಉಪನಗರ ಪ್ರಾ.ಆ.ಕೇಂದ್ರ ರವರ ಮಾಹಿತಿಗಾಗಿ, ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
8) ಸಹಾಯಕ ಇಂಜಿನಿಯರ್, ಬೆಸ್ಕಾಂ ಕೆಂಗೇರಿ ರವರ ಮಾಹಿತಿಗಾಗಿ, ಸದರಿ ಸಭೆಗೆ ಹಾಜರಾಗಲು/ತಮ್ಮ ಪ್ರತಿನಿಧಿ ಸಿಬ್ಬಂದಿಯವರನ್ನು ನಿಯೋಜಿಸಲು ಕೋರಲಾಗಿದೆ.
9) ಸಹಾಯಕ ಇಂಜಿನಿಯರ್ ಬಿ.ಡಬ್ಲ್ಯೂ.ಎಸ್. ಎಸ್.ಬಿ., ರವರ ಮಾಹಿತಿಗಾಗಿ, ಸದರಿ ಸಭೆಗೆ ಹಾಜರಾಗಲು/ತಮ್ಮ ಪ್ರತಿನಿಧಿ ಸಿಬ್ಬಂದಿಯವರನ್ನು ನಿಯೋಜಿಸಲು ಕೋರಲಾಗಿದೆ.
10) ತೋಟಗಾರಿಕಾ ಅಧೀಕ್ಷಕರು, ರಾ.ರಾ.ನಗರ ವಲಯ ರವರ ಮಾಹಿತಿಗಾಗಿ, ಸದರಿ ಸಭೆಗೆ ಹಾಜರಾಗಲು/ತಮ್ಮ ಪ್ರತಿನಿಧಿ ಸಿಬ್ಬಂದಿಯವರನ್ನು ನಿಯೋಜಿಸಲು ಕೋರಲಾಗಿದೆ.
11) ವಾರ್ಡ್ ವ್ಯಾಪ್ತಿಯ ಸಾರ್ವಜನಿಕರು, ಸ್ಥಳೀಯ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಸಭೆಯಲ್ಲಿ ಭಾಗವಹಿಸಲು ಅನುವಾಗುವಂತೆ ಸೂಚನಾ ಫಲಕಕ್ಕೆ ಅಳವಡಿಸಲು
12) ಎಲ್ಲಾ ವಾರ್ಡ್ ಕಮಿಟಿ ಸದಸ್ಯರುಗಳಿಗೆ.



Scanned with CamScanner